# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 970 |
| ಉತ್ತರಿಸಬೇಕಾದ ದಿನಾಂಕ | : 17.12.2024 |
| ಉತ್ತರಿಸಬೇಕಾದ ಸಚಿವರು | : ಸಹಕಾರ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ರಾಜ್ಯ ಕೋ-ಆಪರೇಟಿವ್ ಸೊಸೈಟಿಯಲ್ಲಿ ನಕಲಿ ಠೇವಣಿ ಬಾಂಡ್ ಸೃಷ್ಟಿಸಿ ಅಕ್ರಮ ಹಣ ವರ್ಗಾವಣೆ ಮಾಡಿಕೊಂಡಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು |
| ಆ | ಬಂದಿದ್ದಲ್ಲಿ, ಈ ಪ್ರಕರಣದಲ್ಲಿ ಶಾಮೀಲಾದ ಅಧಿಕಾರಿ/ನೌಕರರು ಯಾರು: (ವಿವರ ನೀಡುವುದು) ಮತ್ತು ಎಷ್ಟು ಮೊತ್ತದ ಅಕ್ರಮ ಹಣ ವರ್ಗಾವಣೆ ಮಾಡಲಾಗಿದೆ: | ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ, ಇವರು ತಮ್ಮ ವರದಿ ದಿನಾಂಕ:15.10.2024 ರಲ್ಲಿ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು, ಈ ಮಹಾಮಂಡಳದ ಆಡಳಿತ ಮಂಡಳಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಇತರ ಸಿಬ್ಬಂದಿಗಳು ಸದರಿ ಮಹಾಮಂಡಳದ ಠೇವಣಿ ಹಣವನ್ನು ದುರುಪಯೋಗ ಪಡಿಸಿಕೊಂಡು, ಈ ಸಂಬಂಧ ನಕಲಿ ದಾಖಲೆಗಳನ್ನು ಸೃಜಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ ಎಂದು ತಿಳಿಸಿದ್ದು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು ಇವರ 111 ನಿಶ್ಚಿತ ಠೇವಣಿ ರಸೀದಿಗಳು ಮತ್ತು ಖಾತೆ ಸಂಖ್ಯೆಗಳು ಶಾಖೆಯಲ್ಲಿರುವ ಮೂಲ ರಶೀದಿಗಳಿಗೆ ಹೊಂದಾಣಿಕೆ ಇರುವುದಿಲ್ಲ. ಈ ಎಲ್ಲಾ ನಿಶ್ಚಿತ ಠೇವಣಿ ರಶೀದಿಗಳು ಮೇಲ್ನೋಟಕ್ಕೆ ನೈಜ ಠೇವಣಿ ರಶೀದಿಗಳಾಗಿರುವುದಿಲ್ಲ. ಹಾಗೂ 111 ಠೇವಣಿ ರಸೀದಿ (Fake Bond Receipts) ಮೊತ್ತವು ರೂ. 17,33,75,000/- ಗಳಾಗಿದ್ದು, |

| | | |
|---|---|---|
| | | ಶಾಖೆಯಿಂದ ತಯಾರಿಸಿರುವ ಪಟ್ಟಿಗೂ ಮಹಾಮಂಡಳದವರು ನೀಡಿದ ಪಟ್ಟಿಗೂ ವ್ಯತ್ಯಾಸವಿರುತ್ತದೆ ಎಂದು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ. |
| ಇ | ಈ ಸಂಬಂಧ ಸರ್ಕಾರ ತಪ್ಪಿತಸ್ಥರ ವಿರುದ್ಧ ತೆಗೆದುಕೊಂಡ ಕಾನೂನು ಕ್ರಮಗಳೇನು? (ವಿವರಿಸುವುದು) | ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು ಇಲ್ಲಿ ನಡೆದಿರುವ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರ ಪ್ರಕರಣ 64 (1) ರ ರೀತ್ಯಾ ಶಾಸನಬದ್ಧ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯನ್ನಾಗಿ ಸಹಕಾರ ಸಂಘಗಳ ಸಹಾಯಕ ನಿಬಂಧಕರು, 2 ನೇ ವಲಯ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಇವರನ್ನು ದಿನಾಂಕ:16-10-2024ರ ನಿಬಂಧಕರ ಕಛೇರಿ ಆದೇಶದ ರೀತ್ಯಾ ವಿಚಾರಣಾಧಿಕಾರಿಯಾನ್ನಾಗಿ ನೇಮಿಸಿದ್ದು, ವಿಚಾರಣೆ ಪ್ರಗತಿಯಲ್ಲಿರುತ್ತದೆ.<br><br>ಈ ಸಂಬಂಧ ಅಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು ಇವರು ಹಗರಣದಲ್ಲಿ ಭಾಗಿಯಾಗಿರುವ ಮಹಾಮಂಡಳದ ಸಿಬ್ಬಂದಿ, ಬಿಡಿಸಿಸಿ ಮತ್ತು ಅಪೆಕ್ಸ್ ಬ್ಯಾಂಕ್ ಸಿಬ್ಬಂದಿ ವಿರುದ್ಧ ನಂದಿನಿ ಲೇ ಔಟ್ ಪೋಲಿಸ್ ಠಾಣೆಯಲ್ಲಿ ದಿನಾಂಕ: 17-10-2024 ರಂದು ಎಫ್ಐಆರ್ ಸಂಖ್ಯೆ:0343/2024 ದಾಖಲು ಮಾಡಿರುತ್ತಾರೆ. |

**ಸಂಖ್ಯೆ: ಸಿಒ 105 ಪಿಎಂಸಿ 2024**

**(ಕೆ.ಎನ್.ರಾಜಣ್ಣ)**
ಸಹಕಾರ ಸಚಿವರು